**ಕರ್ನಾಟಕ ಸರ್ಕಾರ**

**ವಾಣಿಜ್ಯ ತೆರಿಗೆ ಇಲಾಖೆ**

ಸಂಖ್ಯೆ:ಪಿಐಒ/ಆರ್.ಟಿ.ಐ/ಸಿಆರ್-04/2017-18

ವಾಣಿಜ್ಯ ತೆರಿಗೆಗಳ ಆಯುಕ್ತರ ಕಛೇರಿ,
ವಾಣಿಜ್ಯ ತೆರಿಗೆ ಕಾರ್ಯಾಲಯ-1, ಗಾಂಧಿನಗರ,
ಬೆಂಗಳೂರು, ದಿನಾಂಕ:-14ನೇ ಫೆಬ್ರವರಿ 2018.

**ಆದೇಶ**

ವಿಷಯ:- ಮಾಹಿತಿ ಹಕ್ಕು ಕಾಯಿದೆ 2005-ವಾಣಿಜ್ಯ ತೆರಿಗೆ ಇಲಾಖೆಯ ಎಲ್ಲಾ ವಿಭಾಗಗಳಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಿಸುವ ಬಗ್ಗೆ.

ಉಲ್ಲೇಖ:-1) ಸುತ್ತೋಲೆ ಸಂಖ್ಯೆ.ಸಿಆಸುಇ 18 ಆರ್‌ಟಿಐ 2011 ದಿ:03.02.2011.
2) ಕರ್ನಾಟಕ ಸರ್ಕಾರದ ಅಧೀನ ಕಾರ್ಯದರ್ಶಿ(ಆರ್ಥಿಕ ಇಲಾಖೆ), (ವಾ.ತೆ.-2 & ಸಮನ್ವಯ), ರವರ ಪತ್ರ ಸಂಖ್ಯೆ ಆಇ 46 ಸಮಯ 2011 ದಿನಾಂಕ:11/02/2011 & 07-12-2011.
3) ಸಂಖ್ಯೆ:ಪಿಐಒ/ಎಂಎಸ್‌ಸಿ/ಸಿಆರ್-4/2010-11 ದಿನಾಂಕ:21.12.2011.
4) ಆದೇಶ ಸಂಖ್ಯೆ:ವಾ.ತೆ.ಅ.ಆ(ಗು&ಸ)/ಜೆಡಿಎನ್/ನೋಂದಣಿ/ಸಿಆರ್-15/2017-18 ದಿನಾಂಕ:29.06.2017.

*****

ಮಾಹಿತಿ ಹಕ್ಕು ಅಧಿನಿಯಮ 2005ರ ಪರಿಪೂರ್ಣ ಅನುಷ್ಠಾನಕ್ಕಾಗಿ ಪ್ರತಿಯೊಂದು ವಿಭಾಗದಲ್ಲಿ ಗ್ರೂಪ್ 'ಎ' ದರ್ಜೆಯ ಒಬ್ಬ ಹಿರಿಯ ಅಧಿಕಾರಿಯನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸುವಂತೆ ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಜನಸ್ಪಂದನ ಕೋಶ, ಮಾಹಿತಿ ಹಕ್ಕು) ರವರು ಸೂಚಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಮಾಹಿತಿ ಹಕ್ಕು ಅಧಿನಿಯಮದ ಅನುಷ್ಠಾನದ ಹೊಣೆ ನೋಡಲ್ ಅಧಿಕಾರಿಯದ್ದಾಗಿದ್ದು, ಕೆಳಕಂಡ ಕಾರ್ಯಗಳನ್ನು ನಿರ್ದಿಷ್ಟವಾಗಿ ನಿರ್ವಹಿಸಲು ಉಲ್ಲೇಖ(3)ರನ್ವಯ ಇಲಾಖೆಯ ವಿಭಾಗೀಯ ಕಛೇರಿಗಳನ್ನು ಹಾಗೂ ಸಂಬಂಧಿಸಿದ ನೋಡಲ್ ಅಧಿಕಾರಿಗಳನ್ನು ನೇಮಿಸಿ ಆದೇಶಿಸಲಾಗಿದೆ.

ಅ) ಇಲಾಖೆಯಲ್ಲಿರುವ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳ/ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಪಟ್ಟಿಯ ನಿರ್ವಹಿಸುವಿಕೆಯನ್ನು/ಕಾಲಕಾಲಕ್ಕೆ update ಮಾಡುವಿಕೆಯನ್ನು ಧೃಡಪಡಿಸಿಕೊಳ್ಳುವುದು.

ಆ) ಕರ್ನಾಟಕ ಮಾಹಿತಿ ಆಯೋಗಕ್ಕೆ ವಾರ್ಷಿಕ ವರದಿ ತಯಾರಿಸಲು ಬೇಕಾಗುವ ಎಲ್ಲಾ ಮಾಹಿತಿಯನ್ನು ಒದಗಿಸುವುದು.

ಇ) ಮಾಹಿತಿ ಕೋರಿ ಇಲಾಖೆಯಲ್ಲಿ ಸ್ವೀಕೃತವಾಗುವ ಅರ್ಜಿಗಳ ವಿಲೇವಾರಿಯ ಮೇಲ್ವಿಚಾರಣೆ ಮಾಡುವುದು.

ಈ) ಮೊದಲ ಮೇಲ್ಮನವಿ ಪ್ರಾಧಿಕಾರಿಗಳು ಮೇಲ್ಮನವಿಗಳ ವಿಚಾರಣೆಗಾಗಿ ದಿನ ನಿಗಧಿಪಡಿಸಿ 30ದಿನಗಳೊಳಗಾಗಿ ಇತ್ಯರ್ಥಪಡಿಸುವಂತೆ ನೋಡಿಕೊಳ್ಳುವುದು.

ಮುಂದುವರೆದು ಉಲ್ಲೇಖ(4)ರ ಆದೇಶದಲ್ಲಿ ಕರ್ನಾಟಕ ಸರಕು ಮತ್ತು ಸೇವಾ ಕಾಯ್ದೆ 2017ರಡಿಯಲ್ಲಿ ಕೆಲವು ಕಛೇರಿಗಳನ್ನು ಮರುನಾಮಕರಣಗೊಳಿಸಿ, ಸದರಿ ಕಾಯ್ದೆ ಅಡಿಯಲ್ಲಿ ಕಾರ್ಯನಿರ್ವಹಿಸಲು ಯುಕ್ತ ಅಧಿಕಾರಿಗಳೆಂದು ಆದೇಶಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದಲ್ಲಿರುವಂತೆ ಇಲಾಖೆಯ ವಿಭಾಗೀಯ ಕಛೇರಿಗಳನ್ನು ಹಾಗೂ ಸಂಬಂಧಿಸಿದ ನೋಡಲ್ ಅಧಿಕಾರಿಗಳನ್ನು ನೇಮಿಸಿ ಆದೇಶಿಸಲಾಗಿದೆ. ಈ ಆದೇಶವು ತಕ್ಷಣದಿಂದ ಜಾರಿಗೆ ಬಂದಿದ್ದು, ಮುಂದಿನ ಆದೇಶದ ವರೆಗೆ ಜಾರಿಯಲ್ಲಿ ಇರುತ್ತದೆ.

ವಾಣಿಜ್ಯ ತೆರಿಗೆ ಆಯುಕ್ತರು,
(ಕರ್ನಾಟಕ), ಬೆಂಗಳೂರು.

# ಅನುಬಂಧ

| ಕ್ರಮ ಸಂಖ್ಯೆ | ವಾಣಿಜ್ಯ ತೆರಿಗೆ ಇಲಾಖೆಯ ವಿಭಾಗೀಯ ಕಚೇರಿ. | ನೇಮಿಸಿರುವ ಎ-ದರ್ಜೆ ನೋಡಲ್ ಅಧಿಕಾರಿಗಳು |
|---|---|---|
| 1. | ವಾಣಿಜ್ಯ ತೆರಿಗೆಗಳ ಆಯುಕ್ತರವರ ಕಛೇರಿ, ಬೆಂಗಳೂರು. | ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರು(ಕೇಂದ್ರ ಕಛೇರಿ)-1, ಬೆಂಗಳೂರು. |
| 2. | ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರು(ಜಾರಿ), ದಕ್ಷಿಣ ವಲಯ, ಬೆಂಗಳೂರು. | ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರು(ಜಾರಿ), ದಕ್ಷಿಣ ವಲಯ, ಬೆಂಗಳೂರು. |
| 3. | ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರು(ವಲಯ)-1 ಬೆಂಗಳೂರು. | ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರು(ವಲಯ)-1 ಬೆಂಗಳೂರು. |
| 4. | ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರು(ವಲಯ)-2 ಬೆಂಗಳೂರು. | ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರು(ವಲಯ)-2 ಬೆಂಗಳೂರು. |
| 5. | ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರು(ವಲಯ)-3 ಬೆಂಗಳೂರು. | ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರು(ವಲಯ)-3 ಬೆಂಗಳೂರು. |
| 6. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಜಾಗೃತಿ), ಬೆಂಗಳೂರು. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಜಾಗೃತಿ), ಬೆಂಗಳೂರು. |
| 7. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಕಿರಿಯ ಕಾಯ್ದೆಗಳು), ಬೆಂಗಳೂರು. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಕಿರಿಯ ಕಾಯ್ದೆಗಳು), ಬೆಂಗಳೂರು. |
| 8. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-1, ಬೆಂಗಳೂರು. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-1, ಬೆಂಗಳೂರು. |
| 9. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-2, ಬೆಂಗಳೂರು. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-2, ಬೆಂಗಳೂರು. |
| 10. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-3, ಬೆಂಗಳೂರು. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-3, ಬೆಂಗಳೂರು. |
| 11. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-4, ಬೆಂಗಳೂರು. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-4, ಬೆಂಗಳೂರು. |
| 12. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-5, ಬೆಂಗಳೂರು. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-5, ಬೆಂಗಳೂರು. |
| 13. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-6, ಬೆಂಗಳೂರು. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ-6, ಬೆಂಗಳೂರು. |
| 14. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ, ಮೈಸೂರು. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ, ಮೈಸೂರು. |
| 15. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ, ಶಿವಮೊಗ್ಗ. | ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು(ಆಡಳಿತ), ವಿಭಾಗೀಯ ಸರಕು ಮತ್ತು ಸೇವಾ ತೆರಿಗೆ ಕಛೇರಿ, ಶಿವಮೊಗ್ಗ. |